# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – ೫೭೦ ೦೦೬

## ಕಚೇರಿ ಆದೇಶ

ವಿಷಯ: 2025–26ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯಲ್ಲಿ ವಿವಿಧ ಶಿಕ್ಷಣಕ್ರಮಗಳಿಗೆ ಸಿ.ಬಿ.ಸಿ.ಎಸ್/ವಾರ್ಷಿಕ ಪದ್ಧತಿ ಅಡಿಯಲ್ಲಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಬೋಧನಾ ಸಾಮಗ್ರಿಯ ಸಾಫ್ಟ್ ಪ್ರತಿ ಒದಗಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಶೇ.10 ರಷ್ಟು ರಿಯಾಯಿತಿ ನೀಡುವ ಬಗೆಗೆ.

ಉಲ್ಲೇಖ:1. ಕಚೇರಿ ಆದೇಶ ಸಂಖ್ಯೆ:ಕರಾಮುವಿ/ಡೀನ್(ಶೈ)/04/224/2024–25, ದಿನಾಂಕ:27–11–2025
2. ಕಚೇರಿ ಆದೇಶ ಸಂಖ್ಯೆ:ಕರಾಮುವಿ/ಡೀನ್(ಶೈ)/04/224/2024–25, ದಿನಾಂಕ:19–02–2025
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:18–07–2025

* * * *

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2023–24 ಹಾಗೂ 2024–25ರ ನೇ ಶೈಕ್ಷಣಿಕ ಸಾಲಿನ (ಜುಲೈ ಮತ್ತು ಜನವರಿ) ಆವೃತ್ತಿಯಲ್ಲಿ ವಿವಿಧ ಶಿಕ್ಷಣಕ್ರಮಗಳಿಗೆ ಸಿ.ಬಿ.ಸಿ.ಎಸ್ ಪದ್ಧತಿ/ವಾರ್ಷಿಕ ಪದ್ಧತಿ ಅಡಿಯಲ್ಲಿ ಪ್ರವೇಶಾತಿ ಪಡೆದಿರುವ/ಪಡೆಯುವ ವಿದ್ಯಾರ್ಥಿಗಳಿಗೆ ಅಧ್ಯಯನ ಸಾಮಾಗ್ರಿಗಳ ವಿತರಣೆಗೆ ಸಂಬಂಧಿಸಿದಂತೆ, ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡುವ ಕುರಿತು ಈಗಾಗಲೇ ಉಲ್ಲೇಖ(1) ಹಾಗೂ (2) ರಂತೆ ಕಚೇರಿ ಆದೇಶ ಹೊರಡಿಸಲಾಗಿರುತ್ತದೆ.

ಅದರಂತೆ, 2025–26ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯಲ್ಲಿ ವಿವಿಧ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಅಧ್ಯಯನ ಸಾಮಾಗ್ರಿಗಳ ಸಾಫ್ಟ್ ಪ್ರತಿ ಒದಗಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಅಥವಾ ವಾರ್ಷಿಕ/ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಬೋಧನಾ ಶುಲ್ಕದಲ್ಲಿ ಶೇ.10 ರಷ್ಟು ರಿಯಾಯಿತಿ ನೀಡುವ ಕುರಿತು ಮಾನ್ಯ ಕುಲಪತಿಗಳು ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಆದೇಶ ಹೊರಡಿಸಲಾಗಿದೆ.

**ಕಚೇರಿ ಆದೇಶ ಸಂಖ್ಯೆ: ಕರಾಮುವಿ/ಡೀನ್(ಶೈ)/04/224/2024–25, ದಿನಾಂಕ: 19–07–2025**

ಮೇಲಿನ ಪ್ರಸ್ತಾವನೆಗೊಳಪಟ್ಟು, ಹಾಗೂ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, 2025–26ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯಲ್ಲಿ ಎಲ್ಲಾ ಸ್ನಾತಕೋತ್ತರ/ಸ್ನಾತಕ/ಪಿಜಿಡಿಪ್ಲೋಮಾ/ಡಿಪ್ಲೋಮಾ/ಸರ್ಟಿಫಿಕೇಟ್ ಶಿಕ್ಷಣಕ್ರಮಗಳಿಗೆ ಪ್ರವೇಶಾತಿ ಪಡೆಯುವ Fresher's and Renewal's ವಿದ್ಯಾರ್ಥಿಗಳಿಗೆ ಸಿದ್ಧಪಾಠಗಳ ಸಾಫ್ಟ್ ಕಾಪಿ ಮಾತ್ರ ನೀಡಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಅಥವಾ ವಾರ್ಷಿಕ/ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಪ್ರವೇಶಾತಿಯ ಬೋಧನಾ ಶುಲ್ಕದಲ್ಲಿ ಶೇ.10 ರಷ್ಟು ರಿಯಾಯಿತಿ ನೀಡಲು ಆದೇಶಿಸಿದೆ.

ಆದೇಶದ ಮೇರೆಗೆ

ಕುಲಸಚಿವರು

ಗೆ:

1. ಹಣಕಾಸು ಅಧಿಕಾರಿಗಳು, ಕರಾಮುವಿ, ಮೈಸೂರು.
2. ನಿರ್ದೇಶಕರು ಹಾಗೂ ಉಪಕುಲಸಚಿವರು ಪ್ರವೇಶಾತಿ ವಿಭಾಗ, ಕರಾಮುವಿ, ಮೈಸೂರು.
3. ಅಧ್ಯಕ್ಷರು, ಎಲ್ಲಾ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕರಾಮುವಿ, ಮೈಸೂರು.
4. ಎಲ್ಲಾ ಪ್ರಾದೇಶಿಕ ನಿರ್ದೇಶಕರುಗಳು, ಕರಾಮುವಿ, ಪ್ರಾದೇಶಿಕ ಕೇಂದ್ರ.
5. ಉಪ ಕುಲಸಚಿವ (ಸಿದ್ಧಪಾಠ) ವಿಭಾಗ, ಕರಾಮುವಿ

ಪ್ರತಿ :

1. ಎಲ್ಲಾ ಶಾಸನಬದ್ಧ ಅಧಿಕಾರಿಗಳು, ಕರಾಮುವಿ, ಮೈಸೂರು.
2. ಡೀನ್(ಅಧ್ಯಯನ ಕೇಂದ್ರಗಳು), ಕರಾಮುವಿ, ಮೈಸೂರು.(ಪ್ರಾದೇಶಿಕ ಕೇಂದ್ರಗಳಿಗೆ ಮಾಹಿತಿ ಒದಗಿಸುವುದು)
3. ಎಲ್ಲಾ ಉಪಕುಲಸಚಿವ/ಸಹಾಯಕ ಕುಲಸಚಿವ, ಕರಾಮುವಿ, ಮೈಸೂರು.
4. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತ ಶಾಖೆ, ಕರಾಮುವಿ, ಮೈಸೂರು
5. ನೋಡಲ್ ಆಫೀಸರ್ ವೆಬ್‌ಸೈಟ್ ನಿರ್ವಹಣೆ ಕರಾಮುವಿ, ಮೈಸೂರು.
6. ಕುಲಸಚಿವರ ಆಪ್ತ ಸಹಾಯಕರು, ಕರಾಮುವಿ, ಮೈಸೂರು.